ಪಿಡಬ್ಲ್ಯೂ: 1

ಇಂದು ದಿನಾಂಕ: 10.03.2021 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ:** ವಾದಿಯ ಪರ ಶ್ರೀ ಎಸ್.ಪಿ.ಹೆಚ್. ವಕೀಲರಿಂದ:

ನಾನು ನನ್ನ ಮೌಖಿಕ ವಿಚಾರಣೆಯ ಬದಲಾಗಿ ನನ್ನ ಸಾಕ್ಷಿ ಪ್ರಮಾಣ ಪತ್ರ ಹಾಜರುಪಡಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲ ಅಂಶಗಳನ್ನು ನಾನೇ ಖುದ್ದಾಗಿ ವಕೀಲರಿಗೆ ತಿಳಿಯಿಸಿ, ಬರೆಯಿಸಿರುತ್ತೇನೆ. ಅದರಲ್ಲಿರುವ ಅಂಶಗಳೆಲ್ಲವೂ ನಿಜವಿದ್ದು, ಅದರಲ್ಲಿರುವ ಸಹಿಯು ನನ್ನದೇ ಆಗಿರುತ್ತದೆ. ಈ ಕೆಳಕಂಡ ದಾಖಲಾತಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನಿಶಾನೆಕರಿಸಬೇಕೆಂದು ವಿನಂತಿಸಿಕೊಳ್ಳುತ್ತೇನೆ.

ಪಹಣಿ ಪತ್ರಿಕೆಯನ್ನು ಹಾಜರು ಮಾಡಿದ್ದು ಅದನ್ನು ನಿಪಿ-1 ಎಂದು, ಅಸಲು ದಾವಾ ಸಂಖ್ಯೆ: 58/2004 ರ ದೃಢೀಕೃತ ಆದೇಶದ ಹಾಳೆಯನ್ನು ಹಾಜರು ಮಾಡಿದ್ದು ಅದನ್ನು ನಿಪಿ-2 ಎಂದು ಮತ್ತು ಸದರಿ ದಾವೆಯಲ್ಲಿ ಆದ ರಾಜಿ ಡಿಕ್ರಿ ದೃಢೀಕೃತ ಪ್ರತಿಯನ್ನು ಹಾಜರು ಮಾಡಿದ್ದು ಅದನ್ನು ನಿಪಿ-3 ಎಂದು ಗುರುತಿಸಲಾಯಿತು.

(ಮುಂದುವರೆದ ಮುಖ್ಯ ವಿಚಾರಣೆಗೆ ವಕೀಲರು ಸಮಯಾವಕಾಶ ಕೋರಿದ್ದು ಮುಖ್ಯ ವಿಚಾರಣೆಯನ್ನು ಮುಂದೂಡಲಾಯಿತು)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ನನ್ನ ಸಮಕ್ಷಮ

Sd/-

ಓ ಹೇ ಕೇ ಸರಿ ಇದೆ.

ಹೆಚ್ಚುವರಿ ಸಿ.ಜೆ. ಮತ್ತು ಜೆ.ಎಮ್.ಎಫ್.ಸಿ.,
ಹಿರೇಕೆರೂರು.